**ದಿನಾಂಕಃ 08.12.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ನನಗೆ ಚಾಲನಾ ಪರವಾನಗಿ ಇದ್ದು, ಅದನ್ನು ಹಾಜರುಪಡಿಸಿರುತ್ತೇನೆ. ಆ ದಿನ ನಾನು ಬೆಂಗಳೂರಿನಿಂದ ಮುಳಬಾಗಿಲಿಗೆ ಹೋಗುತ್ತಿದ್ದೆನು. ಅಪಘಾತ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿರುತ್ತದೆ ಎಂದರೆ ಸರಿ. ಸದರಿ ರಸ್ತೆಯಲ್ಲಿ ವಿಭಜಕ ಇದೆ ಎಂದರೆ ಸರಿ. ಆಪಾದಿತ ವಾಹನ ಹಿಂಭಾಗದಿಂದ ಬಂದು ಡಿಕ್ಕಿಪಡಿಸಿರುತ್ತದೆ. ಆಗ ನಾನು ರಸ್ತೆಯ ಬಲಭಾಗಕ್ಕೆ ಬಿದ್ದಿರುತ್ತೇನೆ. ಆಪಾದಿತ ವಾಹನ ಡಿಕ್ಕಿಪಡಿಸಿದ ನಂತರ ಸ್ಥಳದಲ್ಲಿ ನಿಲ್ಲಿಸಿರುತ್ತಾರೆ. ಅಪಘಾತವಾದ ನಂತರ ನನಗೆ ಪ್ರಜ್ಞೆ ಇರಲಿಲ್ಲ. ಆಪಾದಿತ ವಾಹನದ ಸಂಖ್ಯೆಯನ್ನು ನೋಡಿರುತ್ತೇನೆ.

ಅಪಘಾತವಾದ ನಂತರ ಸ್ಥಳದಲ್ಲಿದ್ದ ಸಾರ್ವಜನಿಕರು ಎಸ್.ಎನ್.ಆರ್ ಆಸ್ಪತ್ರೆಗೆ ಸೇರಿಸಿರುತ್ತಾರೆ. ಸದರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಪಡೆದು ನಂತರ ಹಾಸ್ಮಾಟ್ ಆಸ್ಪತ್ರೆಗೆ ಬಂದಿರುತ್ತೇವೆ. ಸದರಿ ಆಸ್ಪತ್ರೆಯಲ್ಲಿ 3 ತಿಂಗಳು ದಾಖಲಾಗಿದ್ದೆನು. ಬಿಡುಗಡೆ ಸಮರಿಯಲ್ಲಿ ವೈದ್ಯರ ಸಹಿ ಮತ್ತು ಮೊಹರು ಇಲ್ಲ ಎಂದರೆ ಸಾಕ್ಷಿಯು ಅವರು ನೀಡಿದ ದಾಖಲಾತಿಯನ್ನು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ 6 ಅನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳಲ್ಲಿ ಆ ಬಗ್ಗೆ ನಮೂದು ಇಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಮೂಳೆ ಮುರಿತ ಉಂಟಾಗಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಆಗಿವೆ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತವಾದ 3 ದಿನಗಳ ನಂತರ ಹಾಸ್ಮಾಟ್ ಆಸ್ಪತ್ರೆಗೆ ಹೋಗಿರುತ್ತೇನೆ. ಸದರಿ 3 ದಿನಗಳು ಕೋಲಾರದ ಆಸ್ಪತ್ರೆಯಲ್ಲಿ ಇದ್ದು, ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿರುತ್ತೇನೆ. ನನಗೆ ಸಾಮಾನ್ಯ ಸ್ವರೂಪದ ಗಾಯಗಳು ಆಗಿದ್ದ ಕಾರಣ

ಕೋಲಾರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿ ನನ್ನನ್ನು ಬಿಡುಗಡೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳಿಗೆ ಸಂಬಂಧಿಸಿದಂತೆ ವೈದ್ಯರ ಸಲಹಾ ಚೀಟಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ.

ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಿಸಿದಂತೆ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ. ಪ್ರಮಾಣ ಪತ್ರದ ಖಂಡಿಕೆ 6 ರಿಂದ 8 ರಲ್ಲಿ ತಿಳಿಸಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ. ಬೇರೆ ಯಾವುದೋ ಒಂದು ವಾಹನದಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಪೊಲೀಸರೊಂದಿಗೆ ಶಾಮೀಲಾಗಿ ಆಪಾದಿತ ವಾಹನದ ವಿರುದ್ಧ ತಡವಾಗಿ ಸುಳ್ಳು ದೂರು ನೀಡಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**